ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: [illegible]


ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 19/3/2021

# ಡ್ರಗ್ಸ್ ವಿರೋಧಿ ನೀತಿ ಜಾರಿ ಶೀಘ್ರ

19/3/21

## ಪರಿಷತ್ತಿನಲ್ಲಿ ಗೃಹ ಸಚಿವ ಬೊಮ್ಮಾಯಿ ಮಾಹಿತಿ

ಬೆಂಗಳೂರು: ರಾಜ್ಯದಲ್ಲಿ ಮಾದಕ ಪದಾರ್ಥಗಳ ಮಾರಾಟ ದಂಧೆಗೆ ಕಡಿವಾಣ ಹಾಕಲು ಮತ್ತು ಈ ಪಿಡುಗಿನಿಂದ ಸಮಾಜವನ್ನು ಮುಕ್ತಗೊಳಿಸಲು ಸಮಗ್ರವಾದ 'ಡ್ರಗ್ಸ್ ವಿರೋಧಿ ನೀತಿ' ಜಾರಿಗೆ ತರಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.



ನೀತಿ ಕರಡು ಹಂತದಲ್ಲಿದ್ದು ಮುಂದಿನ ದಿನಗಳಲ್ಲಿ ಅದನ್ನು ಸದನದಲ್ಲಿ ಮಂಡಿಸಲಾಗುವುದು. ಅದೇ ರೀತಿ ಕೇಂದ್ರ ಸರ್ಕಾರದ 'ಮಾದಕ ವಸ್ತುಗಳು ಹಾಗೂ ಅಮಲು ಪದಾರ್ಥಗಳ ನಿಯಂತ್ರಣ ಕಾಯ್ದೆ'ಯ (ಎನ್‌ಡಿಪಿಎಸ್) ನಿಯಮಗಳಲ್ಲಿ ಬದಲಾವಣೆ ತರಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದ್ದು ಈ ನಿಟ್ಟಿನಲ್ಲಿಯೂ ಕ್ರಮ ಕೈಗೊಳ್ಳಲಾಗುವುದು ಎಂದರು.

ವಿಧಾನಪರಿಷತ್ತಿನಲ್ಲಿ ಪ್ರಶ್ನೋತ್ತರ ಅವಧಿ ವೇಳೆ ಬಿಜೆಪಿಯ ಮಹಾಂತೇಶ್ ಕವಟಗಿಮಠ ಪ್ರಶ್ನೆಗೆ ಬೊಮ್ಮಾಯಿ ಅವರು ಉತ್ತರಿಸಿದರು.

ರಾಜ್ಯದಲ್ಲಿ 2018ರಿಂದ 2021ರ ಮಾರ್ಚ್ 10ರ ತನಕ 7, 943 ಮಾದಕ ವಸ್ತುಗಳ ಪ್ರಕರಣಗಳು ದಾಖಲಾಗಿದ್ದು ಇದೇ ಅವಧಿಯಲ್ಲಿ 10,566 ಆರೋಪಿಗಳನ್ನು ಬಂಧಿಸಲಾಗಿದೆ. ಪ್ರಕರಣ ದಾಖಲಿಸಿ ಆರೋಪಿಗಳನ್ನು ಬಂಧಿಸುವುದು ಮುಖ್ಯವಲ್ಲ, ಈ ಪಿಡುಗನ್ನು ಸಮಾಜದಿಂದ ಕಿತ್ತು ಹಾಕಬೇಕು. ಈ ನಿಟ್ಟಿನಲ್ಲಿ ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುತ್ತಿದೆ. ಬೆಂಗಳೂರು ನಗರ ಸೇರಿದಂತೆ ಎಲ್ಲಾ ಜಿಲ್ಲೆಗಳಲ್ಲಿ ನಾರ್ಕೋಟಿಕ್ ಸೆಲ್‌ಗಳನ್ನು ಸ್ಥಾಪಿಸಲಾಗಿದೆ. ಗಡಿ ಜಿಲ್ಲೆಗಳಾದ ಬೆಳಗಾವಿ, ಬೀದರ್, ಕಲಬುರಗಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ತೀವ್ರ ನಿಗಾ ಇಡಲಾಗಿದೆ. ಈ ಪಿಡುಗು ನಿವಾರಣೆಗೆ ಗೃಹ ಇಲಾಖೆಯ ಜೊತೆಗೆ ಶಿಕ್ಷಣ ಮತ್ತು ಆರೋಗ್ಯ ಇಲಾಖೆಗಳು ಕೈ ಜೋಡಿಸಬೇಕು. ಈ ಕುರಿತು ಹಲವು ಸಭೆಗಳನ್ನು ನಡೆಸಲಾಗಿದೆ. ಜನರಲ್ಲಿ ಜಾಗೃತಿ ಮೂಡಿಸಲು ಮತ್ತು ಪ್ರಕರಣಗಳನ್ನು ಬೆಳಕಿಗೆ ತರಲು . ಮಾಧ್ಯಮಗಳ ಪಾತ್ರವೂ ಮುಖ್ಯವಾಗಿದೆ. ಮಾಧ್ಯಮದವರ ಜೊತೆ ಸೇರಿ ಗೃಹ ಇಲಾಖೆ ಜಾಗೃತಿ ಮೂಡಿಸುವಂತಹ ಕೆಲಸ ಮಾಡುತ್ತಿದೆ ಎಂದು ಗೃಹ ಸಚಿವರು ವಿವರಿಸಿದರು.

ಇದೆಲ್ಲದರ ಜೊತೆಗೆ ಡ್ರಗ್ಸ್ ದಂಧೆಗೆ ಕಡಿವಾಣ ಹಾಕಲು ಕಠಿಣ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಸಮಗ್ರ ಡ್ರಗ್ಸ್ ವಿರೋಧಿ ನೀತಿ ತರಲಾಗುತ್ತಿದೆ. ನೀತಿಯ ಕರಡು ಸಿದ್ಧವಾಗುತ್ತಿದ್ದು ಶೀಘ್ರದಲ್ಲೇ ಅದನ್ನು ಸದನದಲ್ಲಿ ಮಂಡಿಸಲಾಗುವುದು. ಎನ್‌ಡಿಪಿಎಸ್ ಕಾಯ್ದೆ ಕೇಂದ್ರ ಸರ್ಕಾರದ್ದು, ಇದರಡಿ ಕ್ರಮ ಜರುಗಿಸಬೇಕಾದರೆ ಕೆಲವೊಂದು ಕಾನೂನು ಕ್ಲಿಷ್ಟತೆಗಳು ಎದುರಾಗುತ್ತವೆ. ಆದರೆ, ರಾಜ್ಯಗಳಲ್ಲಿ ಈ ಕಾಯ್ದೆ ಜಾರಿಗೊಳಿಸಬೇಕಾದಾಗ ನಿಯಮಗಳಲ್ಲಿ ಬದಲಾವಣೆಗಳನ್ನು ಮಾಡಿಕೊಳ್ಳಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿದೆ. ಈ ಅವಕಾಶವನ್ನು ಬಳಸಿಕೊಂಡು ಕಾಯ್ದೆಯ ನಿಯಮಗಳಲ್ಲಿ ಬದಲಾವಣೆ ಸಹ ತರಲಾಗುವುದು ಎಂದು ಬಸವರಾಜ ಬೊಮ್ಮಾಯಿ ತಿಳಿಸಿದರು.

### ಹುಕ್ಕಾ ಪಾರ್ಲರ್ ನಿಷೇಧ

ಹುಕ್ಕಾ ಪಾರ್ಲರ್ ನಡೆಸಲು ಬಿಬಿಎಂಪಿ ಲೈಸನ್ಸ್ ಕೊಡುತ್ತದೆ. ಅಲ್ಲಿ ಮಾದಕ ಪದಾರ್ಥಗಳ ಬಳಕೆಯಾಗುವುದು ತಿಳಿದು ಬಂದರೆ ಪೊಲೀಸರು ಕ್ರಮ ಕೈಗೊಳ್ಳುತ್ತಾರೆ. ಹುಕ್ಕಾ ಪಾರ್ಲರ್‌ಗಳ ನಿಷೇಧಕ್ಕೆ ವಿರೋಧವು ಇದೆ. ಆದರೆ, ಯಾರೇ ಒತ್ತಡ ತಂದರೂ ಹುಕ್ಕಾ ಪಾರ್ಲರ್‌ಗಳನ್ನು ನಿಷೇಧಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವರು ಭರವಸೆ ನೀಡಿದರು.

**ಎನ್‌ಡಿಪಿಎಸ್ ಕಾಯ್ದೆಯಲ್ಲಿ ಎರಡು ಪ್ರಮುಖ ಅಂಶಗಳಿವೆ. ಜತೆಗೆ ಬಹಳ ಬಲಿಷ್ಠವಾದ ಕಾಯ್ದೆ. ಬಹಳ ಯೋಚಿಸಿ, ಕಾನೂನು ಸಲಹೆಗಳನ್ನು ಪಡೆದು ಜಾರಿಗೆ ತರಲಾಗಿದೆ. ಹೀಗಾಗಿ ಈ ಕಾಯ್ದೆಯಲ್ಲಿ ಬದಲಾವಣೆ ತರುವ ಅಗತ್ಯವಿಲ್ಲ.**

**• ಎಸ್.ಟಿ. ರಮೇಶ್, ನಿವೃತ್ತ ಡಿಜಿಪಿ**

**ಎನ್‌ಡಿಪಿಎಸ್ ಕಾಯ್ದೆಯನ್ನು ಸರಿಯಾಗಿ ಜಾರಿ ಮಾಡಿದರೆ ಈ ಕಾಯ್ದೆ ಮೂಲಕವೇ ಡ್ರಗ್ಸ್ ಜಾಲವನ್ನು ತಡೆಯಬಹುದು. ಬೇರೆ ನೀತಿ, ಕಾನೂನು ಅಗತ್ಯವಿಲ್ಲ. ಆದರೆ, ಹೊಸ ನೀತಿಯಿಂದ ಇನ್ನಷ್ಟು ಸುಧಾರಣೆ ಸಾಧ್ಯವಾದರೆ ಒಳ್ಳೆಯದು.**

**• ರೇವಣ್ಣಸಿದ್ದಯ್ಯ, ನಿವೃತ್ತ ಡಿಜಿಪಿ**